AHDCL/2020-21/SE/004-038
27 June 2021

To,
The Deputy Manager
Department of Corporate Services
BSE Limited, Floor25, P.J.Towers
Dalal Street, MUMBAI – 400 001

Scrip code ; 526519

Dear Sir/ Madam,

Subject : Newspaper advertisement for the Meeting of the Board of Directors on Tuesday 29th June 2021, Pursuant to regulation 29(1) and 47 of the SEBI(LODR) Regulations 2015

Enclosed herewith are the copies of the advertisement on Saturday 19 June 2021 on the Notice of the Board meeting of the company;

1. 'Financial Express – English language , All India newspaper publication
2. 'EE- Sanje' – vernacular language newspaper in Karnataka, for publication in principal vernacular language – Kannada.

Please take this intimation on record

Thanking You,
Yours Sincerely,
For Alpine Housing Development Corporation Limited

Kurian Zacharias
Company Secretary and Compliance Officer

WWW.FINANCIALEXPRESS.COM SATURDAY, JUNE 19, 2021

FINANCIAL EXPRESS 13

**Alpine**

**Alpine Housing Development Corporation Limited.**

**CIN** :L85110KA1992PLC013174

**[Reg off: No 302, Alpine Arch, No.10, Langford Road, Bengaluru-560027]**

**Web** : www.alpinehousing.com, **email Id**: contact@alpinehousing.com

Fax No: 91 08022128357,Ph No: 91 080 40473500

**NOTICE**

Pursuant to Regulation 47 read with regulation 29 (1) a of SEBI (Listing Obligations and Disclosure Requirements) Regulations, 2015, notice is hereby given that a meeting of the Board of Directors of the company will be held at the Registered Office on Tuesday, 29th June 2021 at 3 PM to consider the following :

1 To consider and approve the audited financial results of the Company for the quarter and year ended 31st March 2021

2. To transact any other matter which the Board may deem fit.

The said information is also available on the company's website at www.alpinehousing.com and may also be available on the stock exchange at www.bseindia.com

By order of Board

Place : Bangalore
Date : 17.06.2021

For Alpine Housing Development Corporation Limited

Sd/-

Kurian Zacharias

Company Secretary and Compliance Officer

❑ ಮೊದಲನೆ ಪುಟದಿಂದ

## ಸಿಎಂಗೆ ಬುಲಾವ್

ಮುಖ್ಯವಾಗಿ ಮೂರು ವಿಷಯಗಳ ಬಗ್ಗೆ ಅರುಣ್ ಸಿಂಗ್ ವಿಶೇಷ ಗಮನಹರಿಸಿದ್ದು, ಆ ಪೈಕಿ ಮೊದಲನೆಯದು ಯಡಿಯೂರಪ್ಪ ಅವರ ನಾಯಕತ್ವ ಬದಲಾವಣೆ ಮಾಡುವ ಅಗತ್ಯ ಇದೆಯೋ ಇಲ್ಲವೋ? ಎಂಬುದು. ಈ ಹಿನ್ನಲೆಯಲ್ಲಿ ನಾಯಕತ್ವ ಬದಲಿಸಿದರೆ ಮುಂದೆ ಅದು ಯಾವ ರೀತಿಯ ಪರಿಣಾಮಗಳನ್ನು ಬೀರಬಹುದು? ಎಂಬುದಾಗಿ ಕೂಡ ಅಭಿಪ್ರಾಯ ಕ್ರೋಢೀಕರಿಸಿಕೊಂಡಿದ್ದಾರೆ.

ಎರಡನೇ ವಿಷಯ ಒಂದೊಮ್ಮೆ ಯಡಿಯೂರಪ್ಪ ನಾಯಕತ್ವ ಬದಲಿಸುವುದಾದರೆ ಯಾರಿಗೆ ನಾಯಕತ್ವ ನೀಡಬಹುದು? ಯಾರಿಗೆ ಪರ್ಯಾಯ ನಾಯಕತ್ವ ನಿರ್ವಹಿಸುವ ಶಕ್ತಿ ಸಾಮರ್ಥ್ಯಗಳಿವೆ ಎಂಬ ಬಗ್ಗೆ ಕೂಡ ಅರುಣ್ ಸಿಂಗ್ ಮಾಹಿತಿ ಕಲೆ ಹಾಕಿದ್ದಾರೆ.

ಕಡೆಯದಾಗಿ ಯಡಿಯೂರಪ್ಪ ಮುಖ್ಯಮಂತ್ರಿ ಆಗಿ ಮುಂದುವರೆಯಲಿ ಬಿಡಲಿ ಬಿಜೆಪಿಯನ್ನು 2023ರಲ್ಲಿ ನಡೆಯುವ ರಾಜ್ಯ ವಿಧಾನಸಭಾ ಚುನಾವಣೆಗೆ ಹಾಗೂ 2024ರಲ್ಲಿ ನಡೆಯುವ ಲೋಕಸಭಾ ಚುನಾವಣೆಗೆ ಸಜ್ಜುಗೊಳಿಸಬೇಕಿದೆ. ಈ ದೃಷ್ಟಿಯಿಂದ ಏನು ಮಾಡಬೇಕು? ಎಂಬ ಬಗ್ಗೆಯೂ ರಾಷ್ಟ್ರೀಯ ಜೆ.ಪಿ.ನಡ್ಡ ಅವರಿಗೆ ಇಂದು ಸಮಗ್ರ ವರದಿ ಸಲ್ಲಿಕೆ ಮಾಡುವರು.

ಬಳಿಕ ಜೆ.ಪಿ. ನಡ್ಡಾ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಬಳಿ ಚರ್ಚೆ ಮಾಡಿ ರಾಜ್ಯ ಬಿಜೆಪಿ ಬಗ್ಗೆ ಅಂತಿಮ ತೀರ್ಮಾನ ಮಾಡಲಿದ್ದಾರೆ ಎಂದು ಹೇಳಲಾಗಿದೆ.

ಈ ಹಿನ್ನಲೆಯಲ್ಲಿ ಇಂದು ಅರುಣ್ ಸಿಂಗ್ ಅವರು ನೀಡುವ ವರದಿಯು ಮುಖ್ಯಮಂತ್ರಿ ಯಡಿಯೂರಪ್ಪನವರ ಅಧಿಕಾರಾವಧಿ ಮುಗಿಯುತ್ತದೆಯೋ.. ಮುಂದುವರೆಯುತ್ತದೆಯೋ ಎಂಬುದನ್ನು ಕಾದುನೋಡಬೇಕು.

## ವಿನಿಮಯಕ್ಕೆ ಸಮ್ಮತಿ

ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲಿಂದು ಮಹಾರಾಷ್ಟ್ರದ ಜಲಸಂಪನ್ಮೂಲ ಸಚಿವ ಜಯಂತ್ ಪಾಟೀಲ್ ಹಾಗೂ ರಾಜ್ಯದ ಪ್ರವಾಹ ನಿಯಂತ್ರಣ ಮತ್ತು ನಿರ್ವಹಣಾ ಸಮಿತಿಯ ಸಭೆಯಲ್ಲಿ ಈ ನಿರ್ಧಾರಕ್ಕೆ ಬರಲಾಯಿತು.

ಕೃಷ್ಣಾ ಮತ್ತು ಭೀಮಾ ಜಲಾನಯನ ಪ್ರದೇಶದಲ್ಲಿ ಪರಿಣಾಮಕಾರಿ ಪ್ರವಾಹ ನಿರ್ವಹಣೆ, ಎರಡೂ ರಾಜ್ಯಗಳ ನಡುವೆ ಸಚಿವರು, ಕಾರ್ಯದರ್ಶಿಗಳ ಹಂತ ಹಾಗೂ ತಳಹಂತದ ಅಧಿಕಾರಿಗಳ ನಡುವೆ ಉತ್ತಮ ಸಂವಹನ, ಸಮನ್ವಯ ನಿರ್ವಹಿಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ದೂಧ್ ಗಂಗಾ ಯೋಜನೆಯನ್ನು ಎರಡು ವರ್ಷದೊಳಗೆ ಪೂರ್ಣಗೊಳಿಸುವುದಾಗಿ ಮಹಾರಾಷ್ಟ್ರ ಸರ್ಕಾರ ಒಪ್ಪಿಕೊಂಡಿದೆ. ಇದರಿಂದ ಈ ಭಾಗದ ಜನರ ನೀರಾವರಿ ಸೌಲಭ್ಯ ಹೊಂದುವ ಆಕಾಂಕ್ಷೆ ನೆರವೇರಲಿದೆ. ಇದರೊಂದಿಗೆ ಬೇಸಿಗೆಯಲ್ಲಿ ಮಹಾರಾಷ್ಟ್ರದಿಂದ ಕರ್ನಾಟಕಕ್ಕೆ 4 ಟಿಎಂಸಿ ನೀರು ಹಾಗೂ ಮಳೆಗಾಲದಲ್ಲಿ ಮಹಾರಾಷ್ಟ್ರಕ್ಕೆ ರಾಜ್ಯದಿಂದ ಅಷ್ಟೇ ಪ್ರಮಾಣದ ನೀರು ಒದಗಿಸುವ ಬಗ್ಗೆ ತಾಂತ್ರಿಕ ಸಮಿತಿ ರಚಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ.

ಸಭೆಯಲ್ಲಿ ಮಹಾರಾಷ್ಟ್ರ ರಾಜ್ಯದ ಜಲಸಂಪನ್ಮೂಲ ಸಚಿವ ಜಯಂತ್ ಪಾಟೀಲ್, ಕರ್ನಾಟಕದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಡಾ. ಇ.ವಿ. ರಮಣರೆಡ್ಡಿ, ಜಲಸಂಪನ್ಮೂಲ ಇಲಾಖೆಯ ಅಪರಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್, ಕರ್ನಾಟಕ ಮತ್ತು ಮಹಾರಾಷ್ಟ್ರದ ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಶೀಘ್ರ ಆರಂಭಿಸಿ

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಅವರು, ಕೇಂದ್ರವೂ ಪರಿಸರ ಅನುಮತಿಯನ್ನು ಶೀಘ್ರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಮೇಕೆದಾಟು ಯೋಜನೆ ವಿಚಾರವಾಗಿ ಎನ್‌ಜಿಟಿ ದಕ್ಷಿಣ ಪೀಠ ಆರಂಭಿಸಿದ್ದ ಸ್ವಯಂ ಪ್ರೇರಿತ ವಿಚಾರಣೆಯನ್ನು ಪ್ರಧಾನ ಪೀಠ ಇತ್ಯರ್ಥಪಡಿಸಿದೆ. ಯೋಜನೆಗಿದ್ದ ಅಡ್ಡಿಯೊಂದು ನಿವಾರಣೆಯಾಗಿದೆ. ಈಗ ಕೇಂದ್ರದಿಂದ ಶೀಘ್ರವೇ ಅನುಮತಿ ಪಡೆದು ಯೋಜನೆ ಜಾರಿಗೊಳಿಸುವುದರತ್ತ ರಾಜ್ಯ ಸರ್ಕಾರ ಗಮನಹರಿಸಬೇಕು ಎಂದು ಅವರು ಹೇಳಿದ್ದಾರೆ.

ಕೇಂದ್ರ-ರಾಜ್ಯದಲ್ಲಿ ಒಂದೇ ಸರ್ಕಾರ ಇದ್ದರೆ ಸ್ವರ್ಗ ಸೃಷ್ಟಿಯಾಗುವುದಾಗಿ ಬಿಜೆಪಿ ಹೇಳಿತ್ತು. ಸ್ವರ್ಗ ಬೇಡ, ಅನಿಶ್ಚಿತತೆಯಲ್ಲಿ ತೂಗುತ್ತಿರುವ ಮೇಕೆದಾಟು ಯೋಜನೆಗೆ ಪರಿಸರ ಅನುಮತಿಯನ್ನು ಶೀಘ್ರ ಪಡೆದುಕೊಂಡರೆ ಸಾಕು. ನಮ್ಮ ನೆಲ, ಜಲ, ಧನ ಬಳಸಿ ನಮ್ಮವರ ದಾಹ ನೀಗಿಸುವ ಯೋಜನೆ ವಿಚಾರದಲ್ಲಿ ಬಿಜೆಪಿ ಸರ್ಕಾರ ಇನ್ನು ನಿರ್ಲಕ್ಷ್ಯ ತೋರಬಾರದು ಎಂದು ಅವರು ತಿಳಿಸಿದ್ದಾರೆ.

ಕೇಂದ್ರದ ಅನುಮತಿ ಸಿಕ್ಕ ಕೂಡಲೇ ಯೋಜನೆ ಆರಂಭಿಸುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತ್ತು ಬಿಜೆಪಿ ಹೇಳಿಕೆಯನ್ನು ಸೋದರ ಎಂ.ಕೆ.ಸ್ಟಾಲಿನ್ ವಿರೋಧಿಸಿದ್ದಾರೆ. ನ್ಯಾಯಾಲಯದಲ್ಲಿ ವಿಚಾರಣೆಯಾಗುತ್ತಿರುವ ಪ್ರಕರಣವೊಂದರಲ್ಲಿ ಕರ್ನಾಟಕ ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಿದೆ ಎಂಬುದು ಅವರ ಆರೋಪ. ವಿಚಾರಣೆಯಾಗುತ್ತಿರುವ ಯೋಜನೆಯೊಂದಕ್ಕೆ ತಡೆ ತರಲು ಪ್ರಧಾನಿಯನ್ನು ಭೇಟಿಯಾಗಿದ್ದೂ ತಪ್ಪಲ್ಲವೇ ಎಂದು ಅವರು ಪ್ರಶ್ನಿಸಿದ್ದಾರೆ.

ಹೊಗೇನಕಲ್ ಕುಡಿಯುವ ನೀರಿನ ಯೋಜನೆ ವಿಚಾರದಲ್ಲಿ ತಮಿಳುನಾಡು ಯಾವ ರೀತಿ ನಡೆದುಕೊಂಡಿತು ಎಂದು ನಾನು ಹೇಳಬೇಕಿಲ್ಲ. ಆ ಯೋಜನೆ ಆಗಿದ್ದು, ಎಂ.ಕೆ.ಸ್ಟಾಲಿನ್ ಉಪ ಮುಖ್ಯಮಂತ್ರಿ ಆಗಿದ್ದ ಕಾಲದಲ್ಲೇ. ಕುಡಿಯುವ ನೀರಿನ ನೆಪವೊಡ್ಡಿ ತಮಿಳುನಾಡು ಕರ್ನಾಟಕದ ಗಡಿ ದಾಟಿ ಬಂದಿತ್ತು. ಸಮರ್ಥನೆಯನ್ನೂ ಮಾಡಿಕೊಂಡಿತ್ತು. ಮೇಕೆದಾಟು ಕೂಡ ಕುಡಿಯುವ ನೀರಿನ ಯೋಜನೆಯೇ ಎಂದಿದ್ದಾರೆ.

ಮೇಕೆದಾಟು ಯೋಜನೆಯನ್ನು ಯಾವ ಕೋನದಲ್ಲಿ ನೋಡಿದರೂ ಅದು ನ್ಯಾಯವಾಗೇ ಕಾಣುತ್ತದೆ. ಹೀಗಾಗಿ ವಿವಾದ ಅನಗತ್ಯ. ಕಾವೇರಿಗಾಗಿ ಕಲಹ ನಡೆದದ್ದು ಸಾಕು. ಈಗ ನಾವು ಸೋದರತೆ ಮೆರೆಯಬೇಕಾದ ಅನಿವಾರ್ಯತೆ ಇದೆ ಎಂಬುದನ್ನು ಸೋದರ ಎಂ.ಕೆ.ಸ್ಟಾಲಿನ್ ಅವರಿಗೆ ನಾನು ಮತ್ತೊಮ್ಮೆ ಹೇಳಲು ಬಯಸುತ್ತೇನೆ. ಅನಗತ್ಯ ಕಲಹದಲ್ಲಿ, ಅದೂ ಈ ಹೊತ್ತಲ್ಲಿ ನಾವು ಒಡೆದುಹೋಗಬಾರದು ಎಂಬ ಸಲಹೆಯನ್ನು ಹೆಚ್.ಡಿ.ಕೆ. ನೀಡಿದ್ದಾರೆ.

## ಬಸ್ ಸಂಚಾರ

ಆರಂಭಕ್ಕೆ ನಿರ್ಧರಿಸಲಾಗಿದೆ. ಆದರೆ ಹವಾನಿಯಂತ್ರಿತ(ಎಸಿ) ಹಾಗೂ ಮೆಟ್ರೋ ರೈಲು ಪ್ರಾರಂಭ ಮಾಡುವ ಬಗ್ಗೆ ಸರ್ಕಾರದಲ್ಲೇ ಗೊಂದಲವಿದೆ.

ಹೋಟೆಲ್, ಚಿಕ್ಕಚಿಕ್ಕ ಮಾರುಕಟ್ಟೆ, ಕ್ಷೌರದಂಗಡಿಗಳು ಹಾಗೂ ಮದುವೆ ಸಮಾರಂಭಕ್ಕೆ 50 ಜನರಿಗೆ ಅವಕಾಶ ನೀಡಿ ಮುಕ್ತಗೊಳಿಸಲಾಗುವುದು.

ಬಟ್ಟೆ ಅಂಗಡಿ, ಚಿನ್ನದಂಗಡಿ ಸೇರಿದಂತೆ ಎಲ್ಲಾ ಬಗೆಯ ವಾಣಿಜ್ಯ ಮಳಿಗೆಗಳು ಸಹ ಜೂನ್ 21ರಿಂದ ತೆರೆಲಿವೆ. ದಿನಕ್ಕೆ ಎಂಟು ಗಂಟೆಗಳ ಕಾಲ ವ್ಯಾಪಾರ ವಹಿವಾಟು ಮಾಡಲು ಅವಕಾಶ ನೀಡಲಾಗುವುದು.

ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಶೇ.50 ರಷ್ಟು ಗ್ರಾಹಕರಿಗೆ ಪ್ರವೇಶ ಅವಕಾಶ ನೀಡಲಾಗಿದೆ. ಇನ್ನು ಚಿತ್ರಮಂದಿರಗಳು, ಪಬ್, ಬಾರ್, ಜಿಮ್, ಸ್ವಿಮ್ಮಿಂಗ್ ಪೂಲ್, ಕ್ರೀಡಾಂಗಣಗಳು ಯಥಾಸ್ಥಿತಿ ಬಂದ್ ಆಗಿರುತ್ತವೆ.

ರಾಜ್ಯದಲ್ಲಿ ಸೋಂಕು ಪ್ರಮಾಣ ಹೆಚ್ಚಿರುವ ಜಿಲ್ಲೆಗಳಾದ ಚಿಕ್ಕಮಗಳೂರು, ಶಿವಮೊಗ್ಗ, ದಾವಣಗೆರೆ, ಮೈಸೂರು, ಚಾಮರಾಜನಗರ, ಹಾಸನ, ದಕ್ಷಿಣ ಕನ್ನಡ, ಬೆಂಗಳೂರು ಗ್ರಾಮಾಂತರ, ಮಂಡ್ಯ, ಬೆಳಗಾವಿ ಹಾಗೂ ಕೊಡಗು ಜಿಲ್ಲೆಗಳಲ್ಲಿ ಇನ್ನು ಒಂದು ವಾರ ಲಾಕ್‌ಡೌನ್ ಮುಂದುವರೆಯುವ ಸಾಧ್ಯತೆಯಿದೆ. ಉಳಿದ ಜಿಲ್ಲೆಗಳಲ್ಲಿ ಸೆಮಿ ಲಾಕ್‌ಡೌನ್ ಘೋಷಣೆ ಮಾಡಲಾಗುತ್ತಿದೆ.

ಈ ಜಿಲ್ಲೆಗಳಲ್ಲಿ ಬೆಳಗ್ಗೆಯಿಂದ ಮಧ್ಯಾಹ್ನ 2 ಗಂಟೆವರೆಗೆ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಅವಕಾಶ ಕಲ್ಪಿಸುವ ಸಾಧ್ಯತೆಯಿದೆ.

ಶಾಲೆಗಳನ್ನು ತೆರೆಯುವ ಬಗ್ಗೆ ಇನ್ನೂ ಸಹ ನಿರ್ಧಾರ ಮಾಡಿಲ್ಲ. ಈ ಬಗ್ಗೆ ಪ್ರತ್ಯೇಕವಾಗಿ ನಿರ್ಧರಿಸಬೇಕು ಎಂದು ತಾಂತ್ರಿಕ ಸಲಹಾ ಸಮಿತಿ ಸಲಹೆ ನೀಡಿದೆ. ಮೂರನೇ ಹಂತದ ಲಾಕ್‌ಡೌನ್ ಸಡಿಲಿಕೆ ಜುಲೈ 5ರಿಂದ ಪ್ರಾರಂಭವಾಗಲಿದೆ.

3ನೇ ಹಂತದ ಅನ್‌ಲಾಕ್‌ನಲ್ಲಿ ಥಿಯೇಟರ್, ಪಬ್, ಬಾರ್, ಜಿಮ್, ಸ್ವಿಮ್ಮಿಂಗ್‌ಪೂಲ್, ಸ್ಟೇಡಿಯಂಗಳನ್ನು ತೆರೆಯಲು ಅವಕಾಶ ನೀಡುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಇನ್ನು, ಶಾಲೆ-ಕಾಲೇಜುಗಳು 3ನೇ ಹಂತದ ಅನ್‌ಲಾಕ್‌ನಲ್ಲಿ ಪ್ರಾರಂಭಿಸಲಾಗುತ್ತದೆ ಎನ್ನಲಾಗುತ್ತದೆ. ಆದರೆ ಮೂರನೇ ಕೊರೋನಾ ಅಲೆ ಎದುರಾಗುವ ಭೀತಿ ಇದ್ದು, ಪರಿಸ್ಥಿತಿ ನೋಡಿ ಸಚಿವರು ತೀರ್ಮಾನ ತೆಗೆದುಕೊಳ್ಳಲಿದ್ದಾರೆ. ನೈಟ್ ಕರ್ಫ್ಯೂ ತೆರವು ಬಗ್ಗೆಯೂ ಬೇರೆ ಸಭೆ ನಡೆಸಿ ನಿರ್ಧಾರ ಮಾಡಲಾಗುತ್ತದೆ.

ಕಡ್ಡಾಯವಾಗಿ ಕೋವಿಡ್ ನಿಯಮಗಳನ್ನು ಪಾಲಿಸದಿದ್ದರೆ, ಕೊರೋನಾ ಹೆಚ್ಚಾಗುವ ಸಾಧ್ಯತೆ ಇದೆ. ಸದ್ಯ ರಾಜ್ಯದಲ್ಲಿ ಕೊರೋನಾ ಪ್ರಕರಣಗಳು ಕಡಿಮೆಯಾಗುತ್ತಿವೆ. ಅನ್‌ಲಾಕ್ ಬಳಿಕ ಕೊರೋನಾ ಕೇಸ್‌ಗಳು ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಈ ಸಮಯದಲ್ಲಿ ಮಾಲ್‌ಗಳು, ರೆಸ್ಟೋರೆಂಟ್‌ಗಳು, ಶಾಪಿಂಗ್ ಮಾಲ್‌ಗಳು, ಮಾರುಕಟ್ಟೆಗಳನ್ನು ತೆರೆಯಲು ಇನ್ನೂ ಯೋಚಿಸಬೇಕು. ಇಲ್ಲವಾದಲ್ಲಿ ದಂಡ ತೆರಬೇಕಾಗುತ್ತದೆ ಎಂದು ತಾಂತ್ರಿಕ ಸಲಹಾ ಸಮಿತಿ ಎಚ್ಚರಿಕೆಯನ್ನೂ ನೀಡಿದೆ.

ಸಾರಿಗೆ ಸೇವೆ ಆರಂಭ : ಮಹಾಮಾರಿ ಕೊರೊನಾ ವೈರಸ್ ನಿಂದ ಸ್ಥಗಿತಗೊಂಡಿದ್ದ ಬಿಎಂಟಿಸಿ ಬಸ್ ಸೋಮವಾರದಿಂದ ನಗರದಾದ್ಯಂತ ಸಂಚರಿಸುವುದು ಖಚಿತವಾಗಿದೆ.

ನಾಳೆ ಹಾಗೂ ನಾಡಿದ್ದು ಬಸ್ ಸಿಬ್ಬಂದಿಗೆ ಕೊರೊನಾ ಪರೀಕ್ಷೆ ನಡೆಸಲಾಗುತ್ತದೆ. ಕರ್ತವ್ಯಕ್ಕೆ ಹಾಜರಾಗುವ ಮುನ್ನ ನೆಗೆಟಿವ್ ರಿಪೋರ್ಟ್ ಕಡ್ಡಾಯವಾಗಿರುವುದರಿಂದ ನಾಳೆ ಆಯಾಯ ಘಟಕದಲ್ಲಿ ಪರೀಕ್ಷೆ ಮಾಡಲಾಗುತ್ತದೆ.

ಕೊರೊನಾ ಪರೀಕ್ಷೆ ಮಾಡಿಸಿಕೊಳ್ಳುವಂತೆ ಘಟಕದ ವ್ಯವಸ್ಥಾಪಕರು ಈಗಾಗಲೇ ಸೂಚನೆ ನೀಡಿದ್ದು, ನಾಳೆ ಹಾಗೂ ಸೋಮವಾರ ಎಲ್ಲಾ ಘಟಕದಲ್ಲಿಯೂ ಕೋವಿಡ್ ಪರೀಕ್ಷೆ ಮಾಡಲಾಗುತ್ತಿದೆ.

ಎರಡನೇ ಹಂತದ ಲಾಕ್ ಡೌನ್ ಸಡಿಲಿಕೆ ಬಗ್ಗೆ ಇಂದು ಸಂಜೆ ನಡೆಯಲಿರುವ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು. ಕೊರೊನಾ ಮೂರನೇ ಅಲೆ ಭೀತಿ ಕೂಡ ಎದುರಾಗಿದೆ. ಈ ನಿಟ್ಟಿನಲ್ಲಿಯೂ ಎಚ್ಚರಿಕೆ ಕೈಗೊಳ್ಳುವ ಅಗತ್ಯವಿದೆ. ಇದರ ನಡುವೆ ಎರಡನೇ ಹಂತದ ಅನ್ ಲಾಕ್ ನಲ್ಲಿ ಯಾವುದಕ್ಕೆಲ್ಲ ವಿನಾಯಿತಿ ನೀಡಬೇಕು ಎಂಬ ಬಗ್ಗೆಯೂ ಚರ್ಚೆ ನಡೆಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ನಿನ್ನೆಯಷ್ಟೇ ಸಿಎಂ ಹೇಳಿದ್ದರು.

ಈಗಿರುವ ಲಾಕ್‌ಡೌನ್ ಸ್ವಲ್ಪ ಮಟ್ಟಿಗೆ ಸಡಿಲಿಸಲಾಗುವುದು. ಆದರೆ ಕೊರೊನಾ ಮೂರನೇ ಅಲೆ ಪ್ರರಂಭವಾಗಲಿದೆ ಎಂಬ ಸೂಚನೆ ಹಿನ್ನೆಲೆಯಲ್ಲಿ ಮುಂಜಾಗ್ರತೆ ಅಗತ್ಯವಾಗಿದೆ. ಹಾಗಾಗಿ ವೀಕೆಂಡ್ ನಲ್ಲಿ ಈಗಿನಂತೆಯೇ ಕರ್ಫ್ಯೂ ಮುಂದುವರೆಸುವ ಬಗ್ಗೆಯೂ ಚಿಂತನೆ ನಡೆದಿದೆ ಎಂದು ತಿಳಿಸಿದ್ದರು.

ಮುಖ್ಯಮಂತ್ರಿಗಳು ಇಂದು ಸಂಜೆ ಸಚಿವರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದು, ಈ ವೇಳೆ ಕೋವಿಡ್ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆಯಲಿದ್ದಾರೆ. ಬಳಿಕ ತಾಂತ್ರಿಕ ಸಲಹಾ ಸಮಿತಿ ನೀಡಿರುವ ಸಲಹೆಗಳನ್ನು ಪರಿಗಣಿಸಿ ನಿರ್ಧಾರ ಕೈಗೊಳ್ಳುವ ಸಾಧ್ಯತೆಗಳಿವೆ.

## ಅಸಮರ್ಥ

ಕೊರೊನಾ ಸಂಕಷ್ಟದ ಹಿನ್ನಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗಳನ್ನು ರದ್ದುಗೊಳಿಸಿ ಗ್ರೇಡ್ ಆಧಾರದ ಮೇಲೆ ಫಲಿತಾಂಶ ಪ್ರಕಟಿಸುವುದಾಗಿ ಈ ಹಿಂದೆ ಘೋಷಿಸಿದ್ದರು.

ಆದರೆ, ಇದೀಗ ಮಾತು ಬದಲಿಸಿರುವ ಸಚಿವರು ಗ್ರೇಡ್ ಆಧಾರ ರದ್ದುಗೊಳಿಸಿ ಎಸ್‌ಎಸ್‌ಎಲ್‌ಸಿ, ಪ್ರಥಮ ಪಿಯುಸಿ ಅಂಕಗಳ ಆಧಾರದ ಮೇಲೆ ಮಾರ್ಕ್ಸ್ ನೀಡುವುದಾಗಿ ವ್ಯತಿರಿಕ್ತ ಹೇಳಿಕೆ ನೀಡುತ್ತಿದ್ದಾರೆ. ಇದರಿಂದ ಇದುವರೆಗೂ ನೆಮ್ಮದಿಯಿಂದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಆತಂಕ ಎದುರಾಗಿದೆ ಎಂದು ಅವರು ದೂರಿದರು.

ಸುರೇಶ್‌ಕುಮಾರ್ ಅವರಿಗೆ ನಾನು ಅನ್ನುವ ಆಹಂ ಇದೆ. ಹೀಗಾಗಿಯೇ ಅವರು ಪರೀಕ್ಷೆ ವಿಷಯದಲ್ಲಿ ಯಾರನ್ನು ಗಣನೆಗೆ ತೆಗೆದುಕೊಳ್ಳದೆ ಮನಬಂದಂತೆ ನಿಯಮಗಳನ್ನು ಜಾರಿ ಮಾಡುತ್ತಿದ್ದಾರೆ ಎಂದು ಪದ್ಮಾವತಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಇಂದಿನ ವಿದ್ಯಾರ್ಥಿ ಸಮುದಾಯ ಸೂಕ್ಷ್ಮ ಸ್ವಭಾವದವರು ದಿನಕ್ಕೊಂದು ಹೇಳಿಕೆ ನೀಡಿದರೆ ಅವರ ಮನಸ್ಸಿಗೆ ಆಘಾತವಾಗುತ್ತದೆ. ಹೀಗಾಗಿ ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ತಜ್ಞರೊಂದಿಗೆ ಸಮಾಲೋಚಿಸುವುದು ಸೂಕ್ತ ಎಂದು ಅವರು ಅಭಿಪ್ರಾಯಪಟ್ಟರು.

ಸುರೇಶ್ ಕುಮಾರ್ ಅವರು ಯಾವುದೆ ನಿರ್ಧಾರ ಕೈಗೊಳ್ಳುವ ಮುನ್ನ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರೊಂದಿಗೆ ಚರ್ಚಿಸಿ ತಜ್ಞರ ಸಲಹೆ ಸ್ವೀಕರಿಸಿ ಒಂದು ಉತ್ತಮ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಇನ್ನು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಜುಲೈ ಮೂರನೇ ವಾರದಲ್ಲಿ ಪರೀಕ್ಷೆ ನಡೆಸಲಾಗುವುದು ಎಂದು ಹೇಳುತ್ತಿದ್ದಾರೆ.

ಮಕ್ಕಳು ಪರೀಕ್ಷೆಗೆ ತಯಾರಿ ನಡೆಸಿದ ನಂತರ ಮತ್ತೆ ಯಾವ ರೀತಿಯ ಹೇಳಿಕೆ ನೀಡಿ ಗೊಂದಲ ಮೂಡಿಸುತ್ತಾರೋ ಎಂಬ ಆತಂಕ ಪೋಷಕರನ್ನು ಕಾಡುತ್ತಿದೆ. ಈಗಲಾದರೂ ಸುರೇಶ್‌ಕುಮಾರ್ ಅವರು ತಮ್ಮ ಈಗೋ ಬದಿಗೊತ್ತಿ ಮುಖ್ಯಮಂತ್ರಿ ಯಡಿಯೂರಪ್ಪ ಅವರೊಂದಿಗೆ ಸಮಾಲೋಚನೆ ನಡೆಸಿ ತಜ್ಞರ ಸಲಹೆ ಮೇರೆಗೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತಹ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಪೋಷಕರು ಹಾಗೂ ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಇಲ್ಲದಿದ್ದರೆ ನೀವು ಇದರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಪದ್ಮಾವತಿಯವರು ಆಗ್ರಹಿಸಿದ್ದಾರೆ.

## ಸಿಎಂಗೆ ಪತ್ರ

ರಾಜ್ಯದ 412 ಪದವಿ ಕಾಲೇಜುಗಳಲ್ಲಿ ಸುಮಾರು 14,564 ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ, ವಿಶ್ವವಿದ್ಯಾಲಯಗಳ ಧನಸಹಾಯ ಆಯೋಗದ ನಿಯಮಾವಳಿ ಪ್ರಕಾರ, ಅತಿಥಿ ಉಪನ್ಯಾಸಕರು ವಿದ್ಯಾರ್ಹತೆ ಹೊಂದಿದ್ದು, ಕಳೆದ 2 ವರ್ಷಗಳಿಂದ ಕಾಡುತ್ತಿರುವ ಕೊರೊನಾದಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಅತಿ ಕಡಿಮೆ ವೇತನ ಮತ್ತು ಸೇವಾ ಭದ್ರತೆ ಇಲ್ಲದ ಕಾರಣ ಅತಿಥಿ ಉಪನ್ಯಾಸಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಹೀಗಾಗಿ ಅವರನ್ನು ಕಾಯಂಗೊಳಿಸಬೇಕೆಂದು ಮನವಿ ಮಾಡಿಕೊಂಡಿದ್ದಾರೆ.

ಈಗಾಗಲೇ ಕಡಿಮೆ ವೇತನ ಮತ್ತು ಭದ್ರತೆ ಇಲ್ಲದ ಕಾರಣ ರಾಜ್ಯದಲ್ಲಿ ಹಲವಾರು ಉಪನ್ಯಾಸಕರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಎಲ್ಲಾ ವಿದ್ಯಾರ್ಹತೆ ಹೊಂದಿ, ಹಲವು ವರ್ಷಗಳ ಅನುಭವ ಅತಿಥಿ ಉಪನ್ಯಾಸಕರಿಗಿದೆ. ಹಲವಾರು ಜನ ವಯೋಮಿತಿ ಮೀರುತ್ತಿರುವುದರಿಂದ ಅಭದ್ರತೆಯಲ್ಲಿ ಸಿಲುಕಿದ್ದಾರೆ.

ಇವರಂತೆಯೇ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹಂಗಾಮಿಯಾಗಿ ಕರ್ತವ್ಯ ನಿರ್ವಹಿಸಿದ ಪದನಾಮ ಬದಲಾದ ಸ್ಥಳೀಯ ಅಭ್ಯರ್ಥಿ, ಸ್ಟಾಪ್ ಗ್ಯಾಪ್, ಗುತ್ತಿಗೆ ಆಧಾರಿತ, ಅರೆಕಾಲಿಕ ಉಪನ್ಯಾಸಕರನ್ನು ಸರ್ಕಾರ ಮಾನವೀಯತೆಯ ಆಧಾರದ ಮೇಲೆ ಸೂಕ್ತ ಕಾಯ್ದೆ ತಿದ್ದುಪಡಿ ಮಾಡಿ ಅಂಥವರನ್ನ 1982, 1992, 1996 ಮತ್ತು 2003ರಲ್ಲಿ ಖಾಯಂ ಮಾಡಿರುವ ಉದಾಹರಣೆಗಳಿವೆ. ಅದೇ ಮಾದರಿಯಲ್ಲಿ ಈಗ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನ ಖಾಯಂಗೊಳಿಸಿ. ಈ ಬಗ್ಗೆ ಸರ್ಕಾರ ಅಗತ್ಯ ಕ್ರಮ ವಹಿಸುವಂತೆ ಬಸವರಾಜ ಹೊರಟ್ಟಿ ಮುಖ್ಯಮಂತ್ರಿಗೆ ಪತ್ರದ ಬರೆದಿದ್ದಾರೆ

## ಇಳಿಕೆ..

ಕೊರೊನಾ ಚೇತರಿಕೆ ಪ್ರಮಾಣ ಶೇ.96.16ಕ್ಕೆ ಏರಿಕೆಯಾಗಿರುವುದರಿಂದ ಪಾಸಿಟಿವಿಟಿ ರೇಟ್ ಶೇ.2.98ಕ್ಕೆ ಕುಸಿದಿದೆ. ವಾರದ ಪಾಸಿಟಿವಿಟಿ ಶೇ.3.58 ರಷ್ಟು ಇರುವುದು ಉತ್ತಮ ಬೆಳವಣಿಗೆ.

ಕಳೆದ 37 ದಿನಗಳಿಂದ ಸೋಂಕಿನಿಂದ ಚೇತರಿಸಿಕೊಳ್ಳುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಲೆ ಇದೆ. ಹೀಗಾಗಿ 2.98ಕೋಟಿ ಸೋಂಕಿತರ ಪೈಕಿ ಈಗಾಗಲೇ 2,86ಕೋಟಿಗೂ ಹೆಚ್ಚು ಮಂದಿ ಗುಣಮುಖರಾಗಿ ಮನೆಗಳಿಗೆ ತೆರಳಿದ್ದಾರೆ.

ಇದರ ಜೊತೆಗೆ ದೇಶದ್ಯಾಂತ ಲಸಿಕೆ ಹಾಕುವ ಕಾರ್ಯವನ್ನು ತ್ವರಿತಗೊಳಿಸಲಾಗಿದೆ. ಇದುವರೆಗೂ ದೇಶದ 27 ಕೋಟಿಗೂ ಹೆಚ್ಚು ಮಂದಿಗೆ ಲಸಿಕೆ ಹಾಕಲಾಗಿದೆ.

ಬರುವ ಸೋಮವಾರದಿಂದ 18 ವರ್ಷ ಮೇಲ್ಪಟ್ಟವರಿಗೆ ಲಸಿಕೆ ಹಾಕುವ ಕಾರ್ಯ ತ್ವರಿತಗೊಳ್ಳುವುದರಿಂದ ಭಾರತ ಕೊರೊನಾ ಸೋಂಕಿನಿಂದ ಆದಷ್ಟು ಬೇಗ ಚೇತರಿಸಿಕೊಳ್ಳಲಿದೆ ಎಂಬ ಆಶಾಭಾವನೆ ವ್ಯಕ್ತವಾಗುತ್ತಿದೆ.

## ಕಂಬನಿ ಮಿಡಿದ ಭಾರತ

ಜೀವನ ನಡೆಸಿ ಕೊರೊನಾ ಮಹಾಮಾರಿ ಸೋಂಕಿನಿಂದ ಒಂದು ತಿಂಗಳ ಕಾಲ ಆಸ್ಪತ್ರೆಯ ಬೆಡ್ ಮೇಲೆ ಹೋರಾಟ ನಡೆಸುತ್ತಿದ್ದರು ತಮ್ಮ ಆತ್ಮಸ್ಥೈರ್ಯ ಮಾತ್ರ ಕಳೆದುಕೊಂಡಿರಲಿಲ್ಲ.

ಚಿಂತಿಸಬೇಡಿ. ನಾನು ಆರಾಮಾಗಿದ್ದೇನೆ. ನನಗೆ ಕೊರೊನಾ ಸೋಂಕು ಹೇಗೆ ತಗುಲಿತು ಎಂದು ನನಗೆ ಆಶ್ಚರ್ಯವಾಗಿದೆ. ಈ ಹೋರಾಟದಲ್ಲೂ ನಾನು ಗೆದ್ದು ಬರುತ್ತೇನೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದರು. ಆದರೆ ವಿಧಿ ಅವರ ಆತ್ಮಸ್ಥೈರ್ಯಕ್ಕೆ ಕೊಡಲಿಪೆಟ್ಟು ನೀಡಿ ಬಾರದ ಲೋಕಕ್ಕೆ ಅವರನ್ನು ಕರೆದೊಯ್ದಿದೆ.

ಸ್ವತಂತ್ರ ಭಾರತದ ಪ್ರಪ್ರಥಮ ಕ್ರೀಡಾ ಪ್ರತಿಭೆಯಾಗಿ ಹೊರಹೊಮ್ಮಿದ್ದ ಮಿಲ್ಕಾಸಿಂಗ್ ಇನ್ನು ನೆನಪು ಮಾತ್ರ.

ದೇಶ ವಿಭಜನೆ ಸಂದರ್ಭದಲ್ಲಿ ಅವರ ತಂದೆ ತಾಯಿಯನ್ನು ಕಸಾಯಿಖಾನೆಗೆ ಕಳುಹಿಸುವುದನ್ನು ಕಣ್ಣಾರೆ ಕಂಡು ದೆಹಲಿಯ ನಿರಾಶ್ರಿತರ ಶಿಬಿರದಲ್ಲಿ ಕಾಲ ಕಳೆಯಬೇಕಾಯಿತು. ಹೊಟ್ಟೆಪಾಡಿಗಾಗಿ ಸಣ್ಣಪುಟ್ಟ ಅಪರಾಧ ಪ್ರಕರಣಗಳಲ್ಲಿ ಪಾಲ್ಗೊಂಡಿದ್ದ ಸಿಂಗ್ ಸೇನೆ ಸೇರಲು ಮೂರು ಭಾರಿ ಪ್ರಯತ್ನಪಟ್ಟು ವಿಫಲರಾಗಿದ್ದರು.

ಇಂತಹ ವ್ಯಕ್ತಿ ಜಿಂಕೆಯಂತೆ ಓಡಿ ಫ್ಲೈಯಿಂಗ್ ಸಿಖ್ ಎಂದು ಗುರುತಿಸಿಕೊಳ್ಳುವ ಮೂಲಕ ಇತಿಹಾಸ ನಿರ್ಮಿಸುತ್ತಾರೆ ಎಂದು ಯಾರು ಊಹಿಸಿರಲಿಲ್ಲ.

ಒಂದರ ಮೇಲೊಂದರಂತೆ ಸಾಧನೆ ಮಾಡಿ ಇಡೀ ವಿಶ್ವದ ಗಮನ ಸೆಳೆದಿದ್ದ ಮಿಲ್ಕಾಸಿಂಗ್ ಜೀವನ ಇತರರಿಗೆ ಮಾರ್ಗದರ್ಶನವಾಗಿದೆ.

ಇವರ ಜೀವನ ಆಧರಿಸಿ ನಿರ್ಮಾಣವಾದ ಹಿಂದಿ ಚಲನಚಿತ್ರ ಅಭೂತಪೂರ್ವ ಯಶಸ್ಸು ಗಳಿಸಿತ್ತು.

ವಿದ್ಯಾರ್ಥಿ ಸಮುದಾಯ ಹಾಗೂ ಕ್ರಿಡಾಪಟುಗಳು ಮಿಲ್ಕಾಸಿಂಗ್ ಅವರ ಚಲನಚಿತ್ರ ನೋಡಿ ತಮ್ಮ ಕನಸನ್ನು ನನಸು ಮಾಡಿಕೊಳ್ಳುವತ್ತ ಚಿತ್ತ ಹರಿಸಿದ್ದರು.

ಇಂತಹ ಇತಿಹಾಸ ಪುರುಷನ ನಿಧನದಿಂದ ಇಡೀ ಭಾರತವೇ ಅಲ್ಲದೆ ವಿಶ್ವ ಕ್ರೀಡಾ ಲೋಕ ಕಂಬನಿ ಮಿಡಿದಿದೆ.

ರಾಷ್ಟ್ರಪತಿ ರಾಮಾನಾಥ್ ಕೋವಿಂದ್, ಪ್ರಧಾನ ಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ, ರಕ್ಷಣಾ ಸಚಿವ ರಾಜನಾಥ್‌ಸಿಂಗ್, ಕಾಂಗ್ರೆಸ್ ಮುಖಂಡ ರಾಹುಲ್‌ಗಾಂಧಿ, ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಕರ್ನಾಟಕ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಾಲಿವುಡ್ ಘಟಾನುಘಟಿ ನಟರಾದ ಅಮಿತಾಬ್ ಬಚ್ಚನ್, ಶಾರುಖ್ ಖಾನ್, ಅಕ್ಷಯ್‌ಕುಮಾರ್ ಸೇರಿದಂತೆ ದೇಶದ ಸಾವಿರಾರು ಗಣ್ಯರು ಮಿಲ್ಕಾಸಿಂಗ್ ಅವರ ಗುಣಗಾನ ಮಾಡಿದ್ದಾರೆ.

ನಿಮ್ಮ ಕ್ರೀಡಾ ಸ್ಫೂರ್ತಿ ಇತರರಿಗೆ ಮಾದರಿಯಾಗಿತ್ತು. ನಿಮ್ಮನ್ನು ದೇಶದ ಜನ ಸದಾ ಸ್ಮರಿಸಿಕೊಳ್ಳುತ್ತಾರೆ. ಈ ಭೂಮಿ ಇರುವವರೆಗೆ ನಿಮ್ಮ ಹೆಸರು ಚಿರಸ್ಥಾಯಿಯಾಗಿರುತ್ತದೆ ಎಂದು ಗುಣಗಾನ ಮಾಡಿದ್ದಾರೆ.

## ಕುಸಿತ

ಇಂತಹ ಸ್ಥಿತಿಗೆ ನೈಜ ಕಾರಣವೇನು ಎಂಬುದರ ಬಗ್ಗೆ ಸ್ವಿಸ್ ಪ್ರಾಧಿಕಾರದಿಂದ ಕಾರಣ ಕೇಳಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

ಸ್ವಿಸ್ ಬ್ಯಾಂಕ್‌ಗಳಲ್ಲಿ ಭಾರತೀಯರು ಠೇವಣಿ ಇಟ್ಟಿರುವ ಹಣ ಕಳೆದ 13 ವರ್ಷಗಳಲ್ಲೇ ಅಧಿಕವಾಗಿದ್ದು, ಇದುವರೆಗೂ ಸ್ವಿಸ್ ಬ್ಯಾಂಕ್‌ಗಳಲ್ಲಿ 20,700 ಕೋಟಿಗೂ ಅಧಿಕ ಹಣ ಜಮಾ ಮಾಡಲಾಗಿದೆ ಎಂದು ಸ್ವಿಸ್ ಕೇಂದ್ರ ಬ್ಯಾಂಕ್‌ನ ಡೇಟಾ ಉಲ್ಲೇಖಿಸಿ ಪಿಟಿಐ ಕಳೆದ ವಾರ ಸುದ್ದಿ ಪ್ರಕಟಿಸಿತ್ತು.ಇದೀಗ ಬಿಡುಗಡೆ ಮಾಡಿರುವ ಅಂಕಿ ಅಂಶಗಳಲ್ಲಿ ಕಪ್ಪು ಹಣದ ಪ್ರಮಾಣ ಹಾಗೂ ಎನ್‌ಆರ್‌ಐಗಳು ಮತ್ತಿತರರು ಇಟ್ಟಿರುವ ಠೇವಣಿಗಳ ಬಗ್ಗೆ ಉಲ್ಲೇಖ ಮಾಡಿಲ್ಲ ಎಂದು ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ.

ವಿಶ್ವಾಸಾರ್ಹ ಸಂಸ್ಥೆಗಳ ಮೂಲಕ ಸ್ವಿಸ್ ಬ್ಯಾಂಕ್‌ಗಳಲ್ಲಿ ಠೇವಣಿ ಇಡುವವರ ಸಂಖ್ಯೆ ಕಳೆದ 2019ರಿಂದ ಕುಸಿತಗೊಂಡಿದೆ ಎನ್ನಲಾಗಿದೆ. ಭಾರತೀಯ ಕಂಪನಿಗಳಲ್ಲಿ ಹೆಚ್ಚುತ್ತಿರುವ ವ್ಯಾಪಾರ ವಹಿವಾಟುಗಳು, ಸ್ವಿಸ್ ಬ್ಯಾಂಕ್‌ಗಳ ಶಾಖೆಗಳು ಭಾರತದಲ್ಲೇ ಆರಂಭವಾಗಿರುವುದು ಇದಕ್ಕೆ ಕಾರಣ ಇರಬಹುದು ಎಂದು ಸಚಿವಾಲಯ ಸ್ಪಷ್ಟನೆ ನೀಡಿದೆ.

## ಎಸಿಬಿ ಬಲೆಗೆ

ಗುತ್ತಿಗೆದಾರರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದು ಸ್ಥಳೀಯ ಬೆಸ್ಕಾಂ ಇನ್‌ಸ್ಪೆಕ್ಟರ್‌ರಿಂದ ಅನುಮೋದನೆಗೊಂಡು ನಂತರ ಅದು ಶಿವಾನಂದ ಸರ್ಕಲ್ ಬಳಿಯಿರುವ ಬೆಸ್ಕಾಂ ಎಂ.ಟಿ ವಿಭಾಗಕ್ಕೆ ಕಡತ ಬಂದಿತ್ತು.

ಕಡತ ಪರಿಶೀಲಿಸಿ 80 ಕೆವಿ ವಿದ್ಯುತ್ ಸಂಪರ್ಕಕ್ಕಾಗಿ ಟ್ರಾನ್ಸ್‌ಫಾರ್ಮರ್ ಅಳವಡಿಸಲು ಸ್ಥಳ ಪರಿಶೀಲಿಸಿ ನಂತರ ಗುತ್ತಿಗೆದಾರರನ್ನು ಮೊಬೈಲ್ ಕರೆ ಮಾಡಿ ವಿದ್ಯುತ್ ಸಂಪರ್ಕ ಮಂಜೂರಾತಿಗಾಗಿ 5000 ರೂ ಲಂಚ ಕೇಳಲಾಗಿತ್ತು .

ಮೊದಲು 2500 ರೂ ನೀಡಲಾಗಿ ಮತ್ತೆ ಲಂಚಕ್ಕೆ ಬೇಡಿಕೆ ಮುಂದುವರೆದು ಈ ಬಗ್ಗೆ ಎಸಿಬಿ ಗೆ ದೂರು ನೀಡಲಾಗಿತ್ತು .ಕಳೆದ ಜೂ,17 ರಂದು ಜಗದೀಶ್ ಅವರು ದೂರುದಾರರಿಂದ 2500ರೂ ಲಂಚ ಪಡೆಯುವಾಗ ಎಸಿಬಿ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿದ್ದಾರೆ.

ಕಾರ್ಯಪಾಲಕ ಅಭಿಯಂತರ ಜಗದೀಶ್ ಆವರನ್ನು ಬಂಧಿಸಿ ಮುಂದಿನ ತನಿಖೆ ಮುಂದುವರೆದಿದೆ ಎಂದು ಎಸಿಬಿ ಅಧಿಕಾರಿಗಳು ತಿಳಿಸಿದ್ದಾರೆ.

## ಮಹಾಪಾತ್ರ

ಗುರುಪ್ರಸಾದ್ ಅವರ ಸಾವಿಗೆ ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಸಂತಾಪ ವ್ಯಕ್ತಪಡಿಸಿದ್ದಾರೆ.

ಅತ್ಯುತ್ತಮ ಅಧಿಕಾರಿಯಾಗಿದ್ದ ಮಹಾಪಾತ್ರ ಅವರು ದೇಶದ ಬೆಳವಣಿಗೆಗೆ ತಮ್ಮದೇ ಆದ ಸೇವೆ ಸಲ್ಲಿಸಿದ್ದರು ಎಂದು ಗೋಯಲ್ ಬಣ್ಣಿಸಿದ್ದಾರೆ.

ಏರ್‌ಪೋರ್ಟ್ ಆಥಾರಿಟಿ ಆಫ್ ಇಂಡಿಯಾದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಮಹಾಪಾತ್ರ ಅವರು, 2019ರಲ್ಲಿ ಕೈಗಾರಿಕಾ ಇಲಾಖೆಯ ನಿರ್ದೇಶಕರಾಗಿ ನಿಯೋಜನೆಗೊಂಡಿದ್ದರು.

ಕಳೆದ ಏಪ್ರಿಲ್‌ನಲ್ಲಿ ಕೊರೊನಾ ಸೋಂಕು ಕಾಣಿಸಿಕೊಂಡಿದ್ದರಿಂದ ಅವರನ್ನು ಏಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಇದೀಗ ಅವರು ಮಹಾಮಾರಿಗೆ ತಮ್ಮ ಜೀವ ಕಳೆದುಕೊಂಡಿದ್ದಾರೆ.

## ಸಾಫ್ಟ್‌ವೇರ್

ಹೊಸ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಹೊಸ ಸಾಫ್ಟ್‌ವೇರ್‌ನಲ್ಲಿ ಸೋಂಕಿನ ತೀವ್ರತೆ ಮೌಲ್ಯಮಾಪನ ಮಾಡುವ ತಂತ್ರಾಂಶ ಅಳವಡಿಸಲಾಗಿದೆ. ಅದರ ಸಹಾಯದಿಂದ ಯಾವ ರೋಗಿಗೆ ತುರ್ತು ಚಿಕಿತ್ಸೆಯ ಅವಶ್ಯಕತೆ ಇದೆ. ಯಾರಿಗೆ ವೆಂಟಿಲೇಟರ್ ಬೇಕಾಗಿದೆ ಎನ್ನುವುದನ್ನು ಸುಲಭವಾಗಿ ಪತ್ತೆ ಹಚ್ಚಬಹುದಾಗಿದೆ.

ಚಿಕಿತ್ಸೆ ನಂತರವೂ ತಮ್ಮ ಪ್ರಭಾವ ಬಳಸಿ ಐಸಿಯು ಹಾಗೂ ತುರ್ತು ಘಟಕಗಳಲ್ಲಿರುವ ರೋಗಿಗಳ ತಪಾಸಣೆ ನಡೆಸಿ ಅವಶ್ಯಕತೆ ಇಲ್ಲದವರನ್ನು ಡಿಸ್ಚಾರ್ಜ್ ಮಾಡುವುದರಿಂದ ಬೆಡ್‌ಗಳ ಅಭಾವ ತಪ್ಪಿಸಬಹುದಾಗಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ ಹೇಳಿಕೆ ಬಿಡುಗಡೆ ಮಾಡಿದೆ.

ಹೊಸ ಸಾಫ್ಟ್‌ವೇರ್ ರೋಗಿಯ ಲಕ್ಷಣಗಳು, ರೋಗದ ತೀವ್ರತೆ, ಪರೀಕ್ಷಾ ವರದಿಗಳು ಹಾಗೂ ರೋಗಿ ಇತರ ರೋಗ ಲಕ್ಷಣಗಳಿಂದ ನರಳುತ್ತಿದ್ದರೆ ಅದನ್ನು ಪತ್ತೆ ಹಚ್ಚಲಿದೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

ಸದ್ಯ ಈ ಸಾಫ್ಟ್‌ವೇರ್ ಅನ್ನು ಕೋಲ್ಕತ್ತಾದ ಮೂರು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಬಳಕೆ ಮಾಡಲಾಗುತ್ತಿದ್ದು, ಶೀಘ್ರದಲ್ಲೇ ದೇಶದೆಲ್ಲೆಡೆ ವಿಸ್ತರಣೆ ಮಾಡಿ ತಂತ್ರಾಂಶ ಬಳಕೆ ಕುರಿತಂತೆ ಕೊರೊನಾ ವಾರಿಯರ್ಸ್‌ಗಳಿಗೆ ತರಬೇತಿ ನೀಡಲು ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ.

# ■ ಆಗಸ್ಟ್ ವೇಳೆಗೆ ಮೂರನೇ ಅಲೆ

**ನವದೆಹಲಿ,ಜೂ.19–** ದೇಶದೆಲ್ಲೆಡೆ ಲಾಕ್‌ಡೌನ್ ಅನ್‌ಲಾಕ್ ಮಾಡುತ್ತಿರುವ ಬೆನ್ನಲ್ಲೇ ಆಗಸ್ಟ್ ತಿಂಗಳ ವೇಳೆಗೆ ಕೊರೊನಾ ಮೂರನೆ ಅಲೆ ಕಾಣಿಸಿಕೊಳ್ಳುವ ಸಾಧ್ಯತೆ ಇದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.

ಮಾಧ್ಯಮವೊಂದಕ್ಕೆ ನೀಡಿರುವ ಸಂದರ್ಶನದಲ್ಲಿ ಏಮ್ಸ್ ಮುಖ್ಯಸ್ಥ ಡಾ.ರಣದಿಪ್ ಗುಲೇರಿಯಾ ಅವರು ಮೂರ್‍ನಾಲ್ಕು ವಾರಗಳಲ್ಲಿ ಮೂರನೆ ಅಲೆ ಎದುರಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದಾರೆ.

ದೇಶದ ಕೆಲವು ರಾಜ್ಯಗಳಲ್ಲಿ ಲಾಕ್‌ಡೌನ್ ತೆರವುಗೊಳಿಸಲಾಗುತ್ತಿರುವುದರಿಂದ ಜನ ಕೊರೊನಾ ನಿಯಮಗಳನ್ನು ಪಾಲಿಸದೆ ಬೇಕಾಬಿಟ್ಟಿ ಓಡಾಡುತ್ತಿರುವುದರಿಂದ ಮೂರನೇ ಅಲೆ ಆಗಸ್ಟ್ ತಿಂಗಳಲ್ಲಿ ಕಾಣಿಸಿಕೊಂಡರೂ ಆಚ್ಚರಿಪಡುವಂತಿಲ್ಲ ಎಂದಿದ್ದಾರೆ.

ಮೊದಲ ಮತ್ತು ಎರಡನೆ ಅಲೆಯ ಸಂದರ್ಭದಲ್ಲಿ ಸಂಭವಿಸಿದ ಸಾವು-ನೋವುಗಳಿಂದ ಪಾಠ ಕಲಿಯುವಲ್ಲಿ ನಾವು ಎಡವುತ್ತಿರುವುದರಿಂದ ಮೂರನೆ ಅಲೆಯ ಭೀಕರತೆ ಎದುರಿಸಲು ಸಜ್ಜಾಗುವಂತಹ ಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ತಿಳಿಸಿದ್ದಾರೆ.

ಜನ ಹಳೆಯದ್ದನ್ನು ಮರೆತು ಮತ್ತೆ ಗುಂಪುಗೂಡುತ್ತಿರುವುದು ಸಭೆ ಸಮಾರಂಭಗಳಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ಕೊರೊನಾ ಸೋಂಕು ಕೆಲವೇ ದಿನಗಳಲ್ಲಿ ತನ್ನ ಕರಾಳತೆ ತೋರಲಿದೆ. ಅದು ದೂರವೇನಿಲ್ಲ. ಆಗಸ್ಟ್ ವೇಳೆಗೆ ಮೂರನೆ ಅಲೆಯ ಪ್ರಭಾವ ಎದುರಿಸುವುದು ಅನಿವಾರ್ಯವಾಗುವಂತಹ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

# 2022 ರೊಳಗೆ ಭಾರತದ ಬತ್ತಳಿಕೆಗೆ ಸೇರಲಿವೆ 36 ಯುದ್ಧ ವಿಮಾನಗಳು

**ಹೈದ್ರಾಬಾದ್,ಜೂ.19–** ಮುಂದಿನ 2022ರ ವೇಳೆಗೆ ಭಾರತೀಯ ವೈಮಾನಿಕ ಪಡೆಗೆ 36 ರಫೇಲ್ ಯುದ್ಧ ವಿಮಾನಗಳ ಸೇರ್ಪಡೆಯಾಗಲಿದೆ ಎಂದು ಐಎಎಫ್ ಮುಖ್ಯಸ್ಥ ಆರ್‌ಕೆಎಸ್ ಬಡೋರಿಯಾ ತಿಳಿಸಿದ್ದಾರೆ.

ಫ್ರಾನ್ಸ್‌ನಿಂದ ಸಕಾಲಕ್ಕೆ ರಫೇಲ್ ಯುದ್ಧ ವಿಮಾನಗಳು ಭಾರತದ ಬತ್ತಳಿಕೆಗೆ ಸೇರ್ಪಡೆಗೊಳ್ಳಲಿದೆ ಎಂದು ಅವರು ಭರವಸೆ ನೀಡಿದ್ದಾರೆ.

ಕೊರೊನಾ ಸೋಂಕಿನ ತೀವ್ರತೆ ಹಿನ್ನಲೆಯಲ್ಲಿ ಒಂದೆರಡು ವಿಮಾನಗಳ ಸೇರ್ಪಡೆ ವಿಳಂಭವಾಗಬಹುದು ಆದರೆ, 2022 ರವೇಳೆಗೆ 36 ರಫೇಲ್ ಯುದ್ಧ ವಿಮಾನಗಳನ್ನು ತರಿಸಿಕೊಳ್ಳುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಅವರು ದುಂಡಿಗಲ್ ಏರ್‌ಫೋರ್ಸ್ ಅಕಾಡಮಿಯಲ್ಲಿ ಆಯೋಜಿಸಿದ್ದ ಸಂಯೋಜಿತ ಪದವಿ ಕಾರ್ಯಕ್ರಮದ ಪರೇಡ್‌ನಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಕಳೆದ 2016ರಲ್ಲಿ 59 ಸಾವಿರ ಕೋಟಿ ರೂ.ವೆಚ್ಚದಲ್ಲಿ 36 ರಫೇಲ್ ಯುದ್ಧ ವಿಮಾನ ಖರೀದಿಸಲು ಒಡಂಬಡಿಕೆ ಮಾಡಿಕೊಳ್ಳಲಾಗಿತ್ತು.

ಕಳೆದ ಫೆಬ್ರವರಿಯಲ್ಲಿ ರಕ್ಷಣಾ ಸಚಿವ ರಾಜನಾಥ್‌ಸಿಂಗ್ ಅವರು 2022ರ ವೇಳೆಗೆ ಎಲ್ಲಾ ಯುದ್ಧ ವಿಮಾನಗಳು ಭಾರತದ ಬತ್ತಳಿಕೆ ಸೇರಲಿವೆ ಎಂದು ತಿಳಿಸಿದ್ದರು.

ಇದೀಗ ಬಡೋರಿಯಾ ಅವರು 2022 ರ ಅಂತ್ಯದೊಳಗೆ ರಫೇಲ್ ಯುದ್ಧ ವಿಮಾನಗಳು ರಕ್ಷಣಾ ಪಡೆಗೆ ಸೇರ್ಪಡೆಗೊಳ್ಳಲಿವೆ ಎಂದಿದ್ದಾರೆ.



ರಾಹುಲ್‌ಗಾಂಧಿ ಅವರ ಹುಟ್ಟು ಹಬ್ಬ ಅಂಗವಾಗಿ ಚಾಮರಾಜಪೇಟೆಯ ಶಾಸಕರ ಕಚೇರಿಯ ಮುಂಭಾಗ ಅಸಂಘಟಿತ ಕಾರ್ಮಿಕರಿಗೆ ಆಹಾರ ಕಿಟ್‌ಗಳನ್ನು ವಿಪಕ್ಷ ನಾಯಕ ಸಿದ್ದರಾಮಯ್ಯ ವಿತರಿಸಿದರು. ಶಾಸಕರಾದ ಜಮೀರ್ ಅಹ್ಮದ್‌ಖಾನ್, ಅಜಯ್‌ಸಿಂಗ್ ಮತ್ತಿತರ ಮುಖಂಡರು ಪಾಲ್ಗೊಂಡಿದ್ದರು.

# ಸಕ್ಕರೆ ಕಾರ್ಖಾನೆಗೆ ಬೀಗ ಜಡಿದ ಜಿಲ್ಲಾಡಳಿತ

**ಯಾದಗಿರಿ.ಜೂ.19 –** ಕಳೇದ 2 ವರ್ಷಗಳಿಂದ ಕಾರ್ಖಾನೆಗೆ ಕಬ್ಬು ಪಡೆದು ರೈತರ ಹಣ ಬಾಕಿ ಉಳಿಸಿಕೊಂಡಿರುವ ಜಿಲ್ಲೆಯ ವಡಗೇರಾ ತಾಲೂಕಿನ ತುಮಕೂರಿನಲ್ಲಿರುವ ಕೋಗ್ರೀನ್ ಸಕ್ಕರೆ ಕಾರ್ಖಾನೆಗೆ ಜಿಲ್ಲಾಡಳಿತ ಬೀಗ ಜಡಿದಿದೆ. ರೈತರಿಗೆ ಹಣ ನೀಡುವ ವಿಳಂಬ ನೀತಿ ಅನುಸರುತ್ತಿರುವ ಕಾರ್ಖಾನೆ ಆಡಳಿತ ಮಂಡಳಿ ಕಾರ್ಯ ವೈಖರಿ ಖಂಡಿಸಿ, ಯಾದಗಿರಿ, ಕಲಬುರಗಿ, ಬೀದರ್, ರಾಯಚೂರ ಜಿಲ್ಲೆಯ ರೈತರು ಕಳೇದ ತಿಂಗಳು ಕಾರ್ಖಾನೆ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು, ಆ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ರಾಗಪ್ರೀಯಾ,ಕಾರ್ಖಾನೆ ಆಡಳಿತ ಮಂಡಳಿಯೊಂದಿಗೆ ಮಾತನಾಡಿ, 1 ತಿಂಗಳ ಒಳಗಾಗಿ ರೈತರಿಗೆ ಬಾಕಿ ಇರುವ 36.36 ಕೋಟಿ ಹಣ ನೀಡಲು ಸೂಚಿಸಿದರು. ತಿಂಗಳಾದರು ಕಾರ್ಖಾನೆಯವರು ರೈತರಿಗೆ ಹಣ ನೀಡಲಿಲ್ಲ ಪರಿಣಾಮ ಮತ್ತೋಮ್ಮೆ ಪ್ರತಿಭಟನೆ ನಡೆಸಿದರು, ವಿಷಯ ತಿಳಿದ ಜಿಲ್ಲಾಧಿಕಾರಿಗಳು ಕಾರ್ಖಾನೆಗೆ ಬೇಟಿ ನೀಡಿ, ಬೀಗ ಜಡಿಯಲು ಅಧಿಕಾರಿಗಳಿಗೆ ಆದೇಶಿಸಿದರು, ಪರಿಣಾಮ ರೈತರು ತಮಗೆ ಇನ್ನೂ ಹಣ ನೀಡಿಲ್ಲ ಎಂದು ಮತ್ತೆ ಜಿಲ್ಲಾಧಿಕಾರಿಗಳ ಮುಂದೆ ಅಳಲು ತೋಡಿಕೊಳ್ಳುತ್ತಿದ್ದಾರೆ.

Alpine

**Alpine Housing Development Corporation Limited.**

CIN :L85110KA1992PLC013174

[Reg off: No 302, Alpine Arch, No.10, Langford Road, Bengaluru-560027]

**Web** : www.alpinehousing.com, **email Id**: contact@alpinehousing.com

Fax No: 91 08022128357,Ph No: 91 080 40473500

**NOTICE**

Pursuant to Regulation 47 read with regulation 29 (1) a of SEBI (Listing Obligations and Disclosure Requirements) Regulations, 2015, notice is hereby given that a meeting of the Board of Directors of the company will be held at the Registered Office on Tuesday, 29th June 2021 at 3 PM to consider the following :

1 To consider and approve the audited financial results of the Company for the quarter and year ended 31st March 2021

2. To transact any other matter which the Board may deem fit.

The said information is also available on the company's website at www.alpinehousing.com and may also be available on the stock exchange at www.bseindia.com

By order of Board

Place : Bangalore — For Alpine Housing Development Corporation Limited

Date : 17.06.2021 — Sd/-

Kurian Zacharias

Company Secretary and Compliance Officer

Ro.No.213